**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.256/2019**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ನಂಃ 1. ರಮೇಶ ತಂದೆ ಯಲ್ಲಪ್ಪ ಗೊಲ್ಲರ
ವಃ 25 ವರ್ಷ, ಉಃ ಖಾಸಗಿ ಕೆಲಸ
ಸಾಃ ಪುಟಪಾಕ ಗ್ರಾಮ
ತಾಃ ಗುರಮಿಟಕಲ್, ಜಿಃ ಯಾದಗಿರಿ

2. ನರೇಶ @ ನಾರಾಯಣ ತಂದೆ ಯಲ್ಲಪ್ಪ ಗೊಲ್ಲರ
ವಃ 21 ವರ್ಷ, ಉಃ ಖಾಸಗಿ ಕೆಲಸ
ಸಾಃ ಪುಟಪಾಕ ಗ್ರಾಮ
ತಾಃ ಗುರಮಿಟಕಲ್, ಜಿಃ ಯಾದಗಿರಿ

----

**ದೋ ಷಾ ರೋ ಪ ಣೆ**

ನಾನು **ಶ್ರೀ ಬಾಲು**, ಬಿಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 20-01-2019 ರಂದು ಮಧ್ಯಾಹ್ನ 12-45 ಗಂಟೆ ಸುಮಾರಿಗೆ ಸೇಡಂ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಬರುವ ಕೋಡ್ಲಾ ಗ್ರಾಮದಲ್ಲಿ ಬಸ್ ನಿಲ್ದಾಣ ಹತ್ತಿರ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಚಾಸಾ.1 ನೇದ್ದವನು ಮೋಟಾರ ಸೈಕಲ ಮೇಲೆ ಹೊರಟಾಗ ಆರೋಪಿತರು ಚಾಸಾ.1 ನೇದ್ದವನಿಗೆ ಮುಂದೆ ಹೋಗದಂತೆ ತಡೆದು ನಿಲ್ಲಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 341 ಸಂಗಡ 34ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ ಸಮಯ ಮತ್ತು ಸ್ಥಳದಲ್ಲಿ ಆರೋಪಿತರೆಲ್ಲರೂ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಬಂದು, ಆರೋಪಿ.2 ನೇದ್ದವನು ಚಾಸಾ.1 ನೇದ್ದವನಿಗೆ ಹಿಡಿದುಕೊಂಡಿದ್ದು, ಆರೋಪಿ.1 ನೇದ್ದವನು ಅಲ್ಲೆ ಬಿದ್ದ ಬಡಿಗೆ ತೆಗೆದುಕೊಂಡು ಚಾಸಾ.1 ನೇದ್ದವನ ಬಲಗಡೆ ತಲೆಗೆ ಹೊಡೆದು ರಕ್ತಗಾಯಪಡಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 324 ಸಹವಾಚಕ ಕಲಂ 34ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ ಸಮಯ ಮತ್ತು ಸ್ಥಳದಲ್ಲಿ ಆರೋಪಿತರೆಲ್ಲರೂ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಆರೋಪಿ 2 ನೇದ್ದವನು ಚಾಸಾ.1 ನೇದ್ದವರಿಗೆ ನೀನು ನಮ್ಮ ತಾಯಿಯ ಹಿಂದೆ ಯಾಕೆ ಬರುತ್ತಿದ್ದಿ ಸೂಳೆ ಮಗನೇ ನಿನಗೆ ಬಿಡುವುದಿಲ್ಲ ಅಂತಾ

ಅವಾಚ್ಯವಾಗಿ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 16-10-2025 ಪ್ರ.ದ.ನ್ಯಾ.ದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.256/2019**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ನಂಃ 1. ರಮೇಶ ತಂದೆ ಯಲ್ಲಪ್ಪ ಗೊಲ್ಲರ
ವಃ 25 ವರ್ಷ, ಉಃ ಖಾಸಗಿ ಕೆಲಸ
ಸಾಃ ಪುಟಪಾಕ ಗ್ರಾಮ
ತಾಃ ಗುರಮಿಟಕಲ್, ಜಿಃ ಯಾದಗಿರಿ ಹಾಗೂ ಇನ್ನೊಬ್ಬರು

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ- ಆ-1

ಆ-2

ಪ್ರಃ-2) ನಿಮ್ಮ ತಪ್ಪನ್ನು ಒಪ್ಪಿಕೊಳ್ಳುತ್ತಿರೊ ಅಥವಾ ವಿಚಾರಣೆ ನಡೆಯಬೇಕಾ?

ಉಃ- ಆ-1

ಆ-2

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕಃ 16-10-2025 ಪ್ರ.ದ.ನ್ಯಾ.ದಂ. ಸೇಡಂ.